# ಶ್ರೀದುರ್ಗಾದೇವೀ ಸೋತ್ರ ಸುಳಾದಿ

ರಾಗ–ಆನಂದ ಭೈರವಿ

ಧ್ರುವತಾಳ

ದುರ್ಗಾ ದುರ್ಗೆಯೆ ಮಹದುಷ್ಟಜನ ಸಂಹಾರೆ ।
ದುರ್ಗಾಂತರ್ಗತ ದುರ್ಗೆ ದುರ್ಲಭೆ ಸುಲಭೆ ।
ದುರ್ಗಮವಾಗಿದೆ ನಿನ್ನ ಮಹಿಮೆ ಬೊಮ್ಮ ।
ಭರ್ಗಾದಿಗಳಿಗೆಲ್ಲ ಗುಣಿಸಿದರೊ ।
ಸ್ವರ್ಗ ಭೊಮಿ ಪಾತಾಳ ಸಮಸ್ತ ವ್ಯಾಪುತ ದೇವಿ ।
ವರ್ಗಕ್ಕೆ ಮೀರಿದ ಬಲು ಸುಂದರೀ ।
ದುರ್ಗುಣದವರ ಬಾಧೆ ಬಹಳವಾಗಿದೆ ತಾಯಿ ।
ದುರ್ಗತಿಹಾರೆ ನಾನು ಪೇಳುವದೇನು ।
ದುರ್ಗಂಧವಾಗಿದೆ ಸಂಸೃತಿ ನೋಡಿದರೆ ।
ನಿರ್ಗಮ ನಾ ಕಾಣೆನಮ್ಮ ಮಂಗಳಾಂಗೆ ।
ದುರ್ಗೆ ಹೆ ದುರ್ಗೆ ಮಹಾ ದುರ್ಗೆ ಭೂದುರ್ಗೆ ವಿಷ್ಣು ।
ದುರ್ಗೆ ದುರ್ಜಯ ದುರ್ಧಕ್ಷೆ ಶಕ್ತಿ ।
ದುರ್ಗಾಕಾನನ ಗಹನ ಪರ್ವತಘೋರ ಸರ್ಪ ।
ಗರ್ಗರ ಶಬ್ದ ವ್ಯಾಘ್ರ ಕರಡಿ ಮೃತ್ಯು ।
ವರ್ಗ ಭೂತ ಪ್ರೇತ ಪೈಶಾಚಿ ಮೊದಲಾದ ।
ದುರ್ಗುಣ ಸಂಕಟ ಪ್ರಾಪ್ತವಾಗೆ ।
ದುರ್ಗಾದುರ್ಗೆ ಎಂದು ಉಚ್ಚಸ್ವರದಿಂದ ।
ನಿರ್ಗಳಿತನಾಗಿ ಒಮ್ಮೆ ಕೂಗಿದರೂ ।
ಸ್ವರ್ಗಾಪವರ್ಗದಲ್ಲಿ ಹರಿಯೊಡನೆ ಇದ್ದರೂ ।
ಸುರ್ಗಣ ಜಯ ಜಯವೆಂದು ಪೊಗಳುತಿರೆ ।
ಕರ್ಗಳಿಂದಲಿ ಎತ್ತಿ ಸಾಕುವ ಸಾಕ್ಷಿ ಭೊತೆ ।
ನಿರ್ಗುಡಿದಂತೆ ಲೋಕ ಲೀಲೆ ನಿನಗೆ ।
ಸ್ವರ್ಗಂಗಾಜನಕ ನಮ್ಮ ವಿಜಯ ವಿಠ್ಠಲನಂಘ್ರಿ ।
ದುರ್ಗಾಶ್ರಯ ಮಾಡಿ ಬದುಕುವಂತೆ ಮಾಡು ॥೧॥

www.YouSigma.com

–ಮಟ್ಟತಾಳ–

ಅರಿದರಾಂಕುಶ ಶಕ್ತಿ ಪರಶು ನೇಗಲಿಖಡ್ಗ ।
ಸರಸಿಜ ಗದೆ ಮುದ್ಗರ ಚಾಪ ಮಾರ್ಗಣ ।
ವರ ಅಭಯ ಮುಸಲ ಪರಿ ಪರಿ ಆಯುಧವ ।
ಧರಸಿ ಮೆರೆವ ಲಕುಮಿ ಸರಸಿಜ ಭವ ರುದ್ರ ।
ಸರುವ ದೇವತೆಗಳ ಕರುಣಾಪಾಂಗದಲ್ಲಿ ।
ನಿರೀಕ್ಷಿಸಿ ಅವರವರ ಸ್ವರೂಪ ಸುಖಕೊಡುವ ।
ಸಿರಿಭೂಮಿ ದುರ್ಗಾ ಸರ್ವೋತ್ತಮ ನಮ್ಮ ।
ವಿಜಯ ವಿಠ್ಠಲನಂಘ್ರಿ ।
ಪರಮ ಭಕುತಿಯಿಂದ ಸ್ಮರಿಸುವ ಜಗಜ್ಜನನಿ ॥೨॥

–ತ್ರಿವಿಡಿತಾಳ–

ಸ್ತುತಿ ಮಾಡುವೆ ನಿನ್ನ ಕಾಳಿ ಮಹಾಕಾಳಿ ಉ–
ನ್ನತಬಾಹು ಕರಾಳವದನೆ ಚಂದಿರಮುಖೆ ।
ಧೃತಿ ಶಾಂತಿ ಬಹುರೊಪೆ ರಾತ್ರಿ ರಾತ್ರಿ ಚರಣೆ ।
ಸ್ಥಿತಿಯೆ ನಿದ್ರಾಭದ್ರೆ ಭಕ್ತವತ್ಸಲೇ ಭವ್ಯೇ ।
ಚತುರಷ್ಟ ದ್ವಿಹಸ್ತೆ ಹಸ್ತಿ ಹಸ್ತಿಗಮನೆ ಅ–
ದ್ಭುತ ಪ್ರಬಲೆ ಪ್ರವಾಸೆ ದುರ್ಗಾರಣ್ಯವಾಸೆ ।
ಕ್ಷಿತಿಭಾರಹರಣೆ ಕ್ಷೀರಾಬ್ಧಿತನಯೆ ಸ ।
ದ್ಗತಿ ಪ್ರದಾತೆ ಮಾಯಾ ಶ್ರೀಯೆ ಇಂದಿರೆ ರಮೆ ।
ದಿತಿಜಾತೆ ನಿಗ್ರಹೆ ನಿರ್ಧೂತೆ ಕಲ್ಮಷೆ ।
ಪ್ರತಿಕೂಲ ಭೇದೆ ಪೂರ್ಣಬೋಧೆ ರೌದ್ರೇ ।
ಆತಿಶಯ ರಕ್ತಜಿಹ್ವಾಲೋಲೆ ಮಾಣಿಕ್ಯಮಾಲೆ ।
ಜಿತಕಾಮೆ ಜನನ ಮರಣ ರಹಿತ ಖ್ಯಾತೆ ।
ಘೃತ ಪಾತ್ರ ಪರಮಾನ್ನ ತಾಂಬೂಲ ಹಸ್ತೆ ಸು– ।
ವ್ರತೆ ಪತಿವ್ರತೆ ತ್ರಿನೇತ್ರೆ ರಕ್ತಾಂಬರೆ ।
ಶತಪತ್ರನಯನೆ ನಿರುತಕನ್ಯೇ ಉದಯಾರ್ಕ ।
ಶತಕೋಟಿ ಸನ್ನಿಭೆ ಹರಿಯಾಂಕಸಂಸ್ಥೆ ।

ಶ್ರುತಿತತಿನುತೆ ಶುಕ್ಲ ಶೋಣಿತ ರಹಿತೆ ಅ- ।
ಪ್ರತಿಹತೆ ಸರ್ವದಾ ಸಂಚಾರಿಣಿ ಚತುರೆ ।
ಚತುರ ಕಪರ್ದಿಯೆ ಅಂಭ್ರಣಿ ಹ್ರೀ ।
ಉತ್ಪತ್ತಿ ಸ್ಥಿತಿಲಯ ಕರ್ತೆ ಶುಭ್ರಶೋಭನ ಮೂರ್ತೆ ।
ಪತಿತಪಾವನೆ ರನ್ನೆ ಸರ್ವೌಷಧಿಯಲಿದ್ದು ।
ಹತಮಾಡು ಕಾಡುವ ರೋಗಗಳಿಂದ ।
ಕ್ಷಿತಿಯೊಳು ಸುಖದಲ್ಲಿ ಬಾಳುವ ಮತಿಯಿತ್ತು ।
ಸತತ ಕಾಯಲಿ ಬೇಳು ದುರ್ಗೇ ದುರ್ಗೇ ।
ಚ್ಯುತದೂರ ವಿಜಯ ವಿಠ್ಠಲೇಯನ ಪ್ರೀಯೆ ।
ಕೃತಾಂಜಲಿಯಿಂದಲಿ ತಲೆಬಾಗಿ ನಮಿಸುವೆ ॥೩॥

-ಅಟ್ಟತಾಳ-

ಶ್ರೀಲಕ್ಷ್ಮೀಕಮಲಾ ಪದ್ಮಾಪದ್ಮಿನಿ ಕಮ ।
ಲಾಲಯೆ ರಮಾ ವೃಷಾಕಪಿ ಧನ್ಯಾವೃದ್ಧಿ ವಿ- ।
ಶಾಲಾ ಯಜ್ಞಾ ಇಂದಿರೆ ಹಿರಣ್ಯ ಹರಿಣಿ ।
ವಾಲಯ ಸತ್ಯ ನಿತ್ಯಾನಂದ ತ್ರಯಿ ಸುಧಾ ।
ಶೀಲೆ ಸುಗಂಧ ಸುಂದರಿ ವಿದ್ಯಾ ಸುಶೀಲೆ ।
ಸುಲಕ್ಷಣದೇವಿ ನಾನಾ ರೂಪಂಗಳಿಂದ ಮೆರೆವ ಮೃತ್ಯುನಾಶೆ ।
ವಾಲಗಕೊಡು ಸಂತರ ಸನ್ನಿಧಿಯಲ್ಲಿ ।
ಕಾಲ ಕಾಲಕ್ಕೆ ಎನ್ನ ಭಾರ ವಹಿಸುವ ತಾಯಿ ।
ಮೇಲು ಮೇಲು ನಿನ್ನ ಶಕ್ತಿ ಕೀರ್ತಿ ಬಲು ।
ಕೇಳಿ ಕೇಳಿ ಬಂದೆ ಕೇವಲ ಈ ಮನ ।
ಘಾಳಿಯಂತೆ ಪರದ್ರವ್ಯಕ್ಕೆ ಪೋಪುದು ।
ಏಳಲ ಮಾಡದೆ ಉದ್ಧಾರ ಮಾಡುವ ।
ಕೈಲಾಸಪುರದಲ್ಲಿ ಪೂಜೆಗೊಂಬ ದೇವಿ ।
ಮೂಲಪ್ರಕೃತಿ ಸರ್ವ ವರ್ಣಾಭಿಮಾನಿನಿ ।
ಪಾಲಸಾಗರಶಾಯಿ ವಿಜಯ ವಿಠ್ಠಲನೊಳು ।
ಲೀಲೆ ಮಾಡುವ ನಾನಾಭರಣೆ ಭೂಷಣೆ ಪೂರ್ಣೆ ॥೪॥

—ಆದಿತಾಳ—

ಗೋಪಿನಂದನೆ ಮುಕ್ತೆ ದೈತ್ಯಸಂತತಿಗೆ ಸಂ ।
ತಾಪವ ಕೊಡುತಿಪ್ಪ ಮಹಾಕಠೋರ ಉಗ್ರ ।
ರೂಪ ವೈಲಕ್ಷಣೆ ಅಜ್ಞಾನಕ್ಕಭಿಮಾನಿನಿ ।
ತಾಪತ್ರಯ ವಿನಾಶ ಓಂಕಾರೆ ಹೂಂಕಾರೆ ।
ಪಾಪಿ ಕಂಸಗೆ ಭಯ ತೋರಿದ ಬಾಲ ಲೀಲೆ ।
ವ್ಯಾಪುತ ಧರ್ಮಮಾರ್ಗ ಪ್ರೇರಣೆ ಅಪ್ರಾಕೃತೆ ।
ಸ್ವಾಪದಲ್ಲಿ ನಿನ್ನ ನೆನೆಸಿದ ಶರಣನಿಗೆ ।
ಅಪಾರವಾಗಿದ್ದ ವಾರಿಧಿಯಂತೆ ಮಹಾ ।
ಆಪತ್ತು ಬಂದಿರಲು ಹಾರಿ ಪೋಗೋವು ಸಪ್ತ ।
ದ್ವೀಪ ನಾಯಿಕೆ ನರಕ ನಿರ್ಲೇಪೆ ತಮೋಗುಣದ ।
ವ್ಯಾಪಾರ ಮಾಡಿಸಿ ಭಕ್ತಜನಕೆ ಪುಣ್ಯ ।
ಸೋಪಾನ ಮಾಡಿಕೊಡುವ ಸೌಭಾಗ್ಯವಂತೆ ದುರ್ಗೆ ।
ಪ್ರಾಪುತವಾಗಿ ಎನ್ನ ಮನದಲಿ ನಿಂದು ದುಃಖ ।
ಕೊಪದಿಂದಲಿ ಎತ್ತಿ ಕಡೆ ಮಾಡು ಜನ್ಮಂಗಳ ।
ಸೌಪರ್ಣಿ ಮಿಗಿಲಾದ ಸತಿಯರು ನಿತ್ಯ ನಿನ್ನ ।
ಆಪಾದ ಮೌಳಿತನಕ ಭಜಿಸಿ ಭವ್ಯರಾದರು ।
ನಾ ಪೇಳುವದೇನು ಪಾಂಡವರ ಮನೋಭೀಷ್ಟೆ ।
ಈ ಪಂಚ ಭೌತಿಕದಲ್ಲಿ ಆವ ಸಾಧನೆ ಕಾಣೇ ।
ಶ್ರೀಪತಿ ನಾಮಒಂದೇ ಜಿಹ್ವಾಗ್ರದಲಿ ನೆನೆವ ।
ಔಪಾಸನ ಕೊಡು ರುದ್ರಾದಿಗಳ ವರದೇ ।
ತಾಪಸ ಜನಪ್ರೀಯ ವಿಜಯ ವಿಠ್ಠಲ ಮೂರ್ತಿಯ ।
ಶ್ರೀಪಾದಾರ್ಚನೆ ಮಾಳ್ಪೆ ಶ್ರೀಭೂದುರ್ಗಾವರ್ಣಾಶ್ರಯೆ ॥೫॥

—ಜತೆ—

ದುರ್ಗೆ ಹಾ ಹೇ ಹೋ ಹಾಃ ದುರ್ಗೆ ಮಂಗಳ ದುರ್ಗೆ ।
ದುರ್ಗತಿ ಕೊಡದಿರು ವಿಜಯವಿಠ್ಠಲಪ್ರಿಯೆ ॥೬॥

www.YouSigma.com